ಶಾಲಾ ಶಿಕ್ಷಣ ಇಲಾಖೆ
ಕರ್ನಾಟಕ ಶಾಲಾ ಗುಣಮಟ್ಟ ಮೌಲ್ಯಾಂಕನ ಮತ್ತು ಅಂಗೀಕರಣ ಪರಿಷತ್ತು
**Karnataka School Quality Assessment & Accreditation Council**
ಕೆ.ಎಸ್.ಇ.ಎ.ಬಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–03. ದೂರವಾಣಿ ಸಂಖ್ಯೆ: 23341615, 23562283, 29720300
ಫ್ಯಾಕ್ಸ್: 080–23347670, e-mail: ksqaacbangalore@gmail.com & ksqaacbengaluru@gmail.com

ಸಂಖ್ಯೆ: ಕೆ4/5, 8 ಮತ್ತು 9ನೇ.ಮೌ/06/2023–24 ದಿನಾಂಕ: 12.03.2024

# ಜ್ಞಾಪನ

ವಿಷಯ:– 2023–24ನೇ ಸಾಲಿನಲ್ಲಿ ರಾಜ್ಯ ಪಠ್ಯಕ್ರಮ ಅನುಸರಿಸುತ್ತಿರುವ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಶಾಲೆಗಳ 5, 8 ಮತ್ತು 9ನೇ ತರಗತಿ ವಿದ್ಯಾರ್ಥಿಗಳಿಗೆ ದಿನಾಂಕ: 13.03.2024 ರಿಂದ 16.03.2024 ರವರೆಗೆ ನಡೆಸಬೇಕಾಗಿದ್ದ ಮೌಲ್ಯಾಂಕನವನ್ನು ಮುಂದೂಡಿರುವ ಬಗ್ಗೆ.

ಉಲ್ಲೇಖ :– 1. ಸರ್ಕಾರದ ಆದೇಶ ಸಂಖ್ಯೆ ಇಪಿ 209 ಎಸ್‌ಎಲ್‌ಬಿ 2023, ದಿನಾಂಕ: 16.11.2023
2. ಈ ಕಛೇರಿ ಮಾರ್ಗಸೂಚಿ ಸಮಸಂಖ್ಯೆ ದಿನಾಂಕ: 22.02.2024
3. ಈ ಕಛೇರಿ ಪತ್ರ ಸಮಸಂಖ್ಯೆ ದಿನಾಂಕ: 05.01.2024

~*~*~*~

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ (1) ಮತ್ತು (2) ರನ್ವಯ 2023–24ನೇ ಸಾಲಿನಲ್ಲಿ ರಾಜ್ಯ ಪಠ್ಯಕ್ರಮ ಅನುಸರಿಸುತ್ತಿರುವ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಶಾಲೆಗಳ 5, 8 ಮತ್ತು 9ನೇ ತರಗತಿಯ ವಿದ್ಯಾರ್ಥಿಗಳಿಗೆ ಸಂಕಲನಾತ್ಮಕ ಮೌಲ್ಯಮಾಪನ–2 (SA-2) ಕಾರ್ಯವನ್ನು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯ ಕೆ.ಎಸ್.ಕ್ಯು.ಎ.ಎ.ಸಿ ವತಿಯಿಂದ ನಡೆಸಲಾಗುತ್ತಿದೆ.

ಸದರಿ ಮೌಲ್ಯಾಂಕನವನ್ನು ಹೈಕೋರ್ಟ್ ಏಕಸದಸ್ಯ ಪೀಠವು ರದ್ದುಪಡಿಸಿ ನೀಡಿದ್ದ ತೀರ್ಪಿಗೆ ವಿಭಾಗೀಯ ಪೀಠವು ಮಧ್ಯಂತರ ತಡೆಯಾಜ್ಞೆ ನೀಡಿರುತ್ತದೆ. ಸದರಿ ವಿಭಾಗೀಯ ಪೀಠವು ನೀಡಿದ್ದ ಮಧ್ಯಂತರ ತಡೆಯಾಜ್ಞೆಯನ್ನು ಘನ ಸರ್ವೋಚ್ಚ ನ್ಯಾಯಾಲಯವು ರದ್ದುಪಡಿಸಿರುತ್ತದೆ. ಹಾಗಾಗಿ 5ನೇ ತರಗತಿಯ ವಿದ್ಯಾರ್ಥಿಗಳಿಗೆ ದಿನಾಂಕ: 13.03.2024 ರಿಂದ 14.03.2024 ರವರೆಗೆ ಹಾಗೂ 8 ಮತ್ತು 9ನೇ ತರಗತಿ ವಿದ್ಯಾರ್ಥಿಗಳಿಗೆ ದಿನಾಂಕ:13.03.2024 ರಿಂದ 16.03.2024 ರವರೆಗೆ ನಡೆಸಬೇಕಿರುವ ಮೌಲ್ಯಾಂಕನವನ್ನು ಮುಂದೂಡಲಾಗಿರುತ್ತದೆ. ಸದರಿ ಮಾಹಿತಿಯನ್ನು ಸಂಬಂಧಿಸಿದ ಉಪನಿರ್ದೇಶಕರು(ಆಡಳಿತ) ಮತ್ತು ಬ್ಲಾಕುಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳು ಶಾಲಾ ಮುಖ್ಯ ಶಿಕ್ಷಕರು/ ಪ್ರಾಂಶುಪಾಲರಿಗೆ ತಿಳಿಸಿ ಸೂಕ್ತ ಕ್ರಮವಹಿಸುವುದು.

ಮುಂದುವರೆದು, ಈ ಕಛೇರಿಯ ಮುಂದಿನ ಆದೇಶದವರೆಗೆ ಈಗಾಗಲೇ ಕ್ಷೇತ್ರಶಿಕ್ಷಣಾಧಿಕಾರಿಗಳ ಹಂತಕ್ಕೆ ಸರಬರಾಜಾಗಿರುವ ಪ್ರಶ್ನೆಪತ್ರಿಕೆಗಳನ್ನು ತಮ್ಮ ಹಂತದಲ್ಲಿ ಸಂರಕ್ಷಿಸಿ ಸುರಕ್ಷಿತವಾಗಿಡಲು ಎಲ್ಲಾ ಬ್ಲಾಕುಗಳ ಕ್ಷೇತ್ರಶಿಕ್ಷಣಾಧಿಕಾರಿಗಳು ಹಾಗೂ ಉಪನಿರ್ದೇಶಕರು (ಆಡಳಿತ) ರವರು ಸೂಕ್ತ ಕ್ರಮವಹಿಸುವುದು.

{ಮಾನ್ಯ ಅಧ್ಯಕ್ಷರಿಂದ ಅನುಮೋದಿಸಲ್ಪಟ್ಟಿದೆ}

12/3/2024
ಕಾರ್ಯನಿರ್ವಾಹಕ ನಿರ್ದೇಶಕರು
ಕೆ.ಎಸ್.ಕ್ಯು.ಎ.ಎ.ಸಿ

ಪ್ರತಿಯನ್ನು ಸೂಕ್ತ ಕ್ರಮಕ್ಕಾಗಿ:–

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ ಮತ್ತು ಅಭಿವೃದ್ಧಿ) ರವರಿಗೆ.
2. ರಾಜ್ಯದ ಎಲ್ಲಾ 5, 8 ಮತ್ತು 9ನೇ ತರಗತಿ ಮೌಲ್ಯಾಂಕನದ ಜಿಲ್ಲಾ ಹಾಗೂ ತಾಲ್ಲೂಕು ನೋಡಲ್ ಅಧಿಕಾರಿಗಳಿಗೆ.
3. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿಗಳಿಗೆ.
4. ಶಾಲಾ ಮುಖ್ಯ ಶಿಕ್ಷಕರು/ಪ್ರಾಂಶುಪಾಲರು (ಕ್ಷೇತ್ರಶಿಕ್ಷಣಾಧಿಕಾರಿಗಳ ಮೂಲಕ).

ಪ್ರತಿಯನ್ನು ಗೌರವಪೂರ್ವಕವಾಗಿ ಮಾಹಿತಿಗಾಗಿ,

1. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂಗಳೂರು ರವರಿಗೆ,
2. ಮಾನ್ಯ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ರವರಿಗೆ,
3. ಮಾನ್ಯ ಅಧ್ಯಕ್ಷರು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, ಬೆಂಗಳೂರು ರವರಿಗೆ,
4. ಮಾನ್ಯ ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರ್ಗಿ ಮತ್ತು ಧಾರವಾಡ ರವರಿಗೆ.
5. ಕಛೇರಿ ಪ್ರತಿ.